# ಕರ್ನಾಟಕ ಸರ್ಕಾರದ ನಡವಳಿಗಳು

| | |
|---|---|
| ವಿಷಯ | ಕರ್ನಾಟಕ ರಾಜ್ಯದಲ್ಲಿ ಕೇಂದ್ರ ಪುರಸ್ಕೃತ ಶಿಕ್ಷಕರ ಶಿಕ್ಷಣ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ. |
| ಓದಲಾಗಿದೆ | ನಿರ್ದೇಶಕರು, ಡಿಎಸ್ಇಆರ್‌ಟಿ, ಬೆಂಗಳೂರು ಇವರ ಪತ್ರ ಸಂಖ್ಯೆ: ಡಿಎಸ್ಇಆರ್‌ಟಿ/ಟಿಇಸಿ/ಟಿಇಎಬಿ/2014-15 ದಿನಾಂಕ: 18.08.2014 |

**ಪ್ರಸ್ತಾವನೆ:**

1. ಮೇಲೆ ಓದಲಾದ (1) ರ ಪ್ರಸ್ತಾವನೆಯಲ್ಲಿ ಭಾರತ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯವು ರಾಜ್ಯಗಳಲ್ಲಿ ಶಿಕ್ಷಕರ ಶಿಕ್ಷಣವನ್ನು ಸಂರಚನೆ ಹಾಗೂ ಸಂಯೋಜನೆ ಮಾಡಲು ಮಾರ್ಗದರ್ಶನವನ್ನು ನೀಡಿದ್ದು, 12ನೇ ಯೋಜನಾ ಅವಧಿಯಲ್ಲಿ ಶಿಕ್ಷಕರ ಶಿಕ್ಷಣವನ್ನು ಜಾರಿಗೊಳಿಸಲು 75:25 ಅನುಪಾತದಲ್ಲಿ ರಾಜ್ಯ ಸರ್ಕಾರಕ್ಕೆ ಅನುದಾನ ಸಹಾಯ ನೀಡುತ್ತಿದೆ ಎಂದು ತಿಳಿಸಿದೆ.
2. ಅದಲ್ಲದೆ ಶಿಕ್ಷಕರ ಶಿಕ್ಷಣ ಕಾರ್ಯಕ್ರಮದ ಮುಖ್ಯ ಉದ್ದೇಶಗಳು ಇಂತಿದೆ;
    1. ಆರ್.ಟಿ.ಇ ಕಾಯ್ದೆಯಲ್ಲಿ ತಿಳಿಸಿರುವಂತೆ ಶಿಕ್ಷಕರ ತಯಾರಿಗೆ ಸಂಬಂಧಿಸಿದ ಪರಿಮಾಣಾತ್ಮಕ ಹಾಗೂ ಗುಣಾತ್ಮಕ ಸವಾಲುಗಳನ್ನು ಎದುರಿಸುವುದು.
    2. ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನದ ಅಡಿಯಲ್ಲಿ ಪ್ರೌಢಶಾಲಾ ಶಿಕ್ಷಕರಿಗೆ ಸೇವಾ ನಿರತ ತರಬೇತಿ ನೀಡಲು ಸಾಂಸ್ಥಿಕ ಸಾಮರ್ಥ್ಯವನ್ನು ಅಭಿವೃದ್ಧಿ ಪಡಿಸುವುದು.
    3. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶೈಕ್ಷಣಿಕ ಉನ್ನತ ಅಧ್ಯಯನ ಸಂಸ್ಥೆಯನ್ನು (IASEs)ಗಳನ್ನು ಬಲಪಡಿಸುವುದು, ವಿಶ್ವ ವಿದ್ಯಾಲಯಗಳಲ್ಲಿನ ಶಿಕ್ಷಣ ವಿಭಾಗವನ್ನು IASEs ಗಳಾಗಿ ಉನ್ನತೀಕರಿಸುವುದು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯಗಳನ್ನು (CTEs) ಬಲಪಡಿಸುವುದು, ಹೊಸ CTEs ಗಳನ್ನು ಪ್ರಾರಂಭಿಸುವುದು, ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳನ್ನು (DIETs) ಬಲಪಡಿಸುವುದು ಮತ್ತು ಪ್ರೌಢಶಾಲಾ ಹಂತದ ಶಿಕ್ಷಕರನ್ನು ತರಬೇತುಗೊಳಿಸುವಂತೆ ಅವುಗಳ ವ್ಯಾಪ್ತಿಯನ್ನು ವಿಸ್ತರಿಸುವುದು.

3. ಮಾನವ ಸಂಪನ್ಮೂಲ ಇಲಾಖೆಯ ಮಾರ್ಗಸೂಚನೆಗಳಂತೆ ತಯಾರಿಸಿದ 2012-13ನೇ ಸಾಲಿನಲ್ಲಿ ರೂ 56.22 ಕೋಟಿಗಳು, 2013-14ನೇ ಸಾಲಿನಲ್ಲಿ ರೂ 46.22 ಕೋಟಿಗಳು ಮತ್ತು 2014-15ನೇ ಸಾಲಿನಲ್ಲಿ ರೂ 51.71 ಕೋಟಿಗಳ ವಾರ್ಷಿಕ ಕಾರ್ಯಯೋಜನೆಗಳನ್ನು ಕೇಂದ್ರ ಸರ್ಕಾರದ ಶಿಕ್ಷಕರ ಶಿಕ್ಷಣ ಗುಣಮಟ್ಟ ನಿಷ್ಕರ್ಷ ಮಂಡಳಿ (Teacher Education Appraisal Board, TEAB) ಅನುಮೋದಿಸಿದೆ. ಸದರಿ ಒಟ್ಟು ರೂ 154.15 ಕೋಟಿಗಳಲ್ಲಿ ಕೇಂದ್ರ ಸರ್ಕಾರವು ರೂ 115.61 ಕೋಟಿಗಳನ್ನು ಬಿಡುಗಡೆ ಮಾಡಿರುವುದನ್ನು ಪ್ರಸ್ತಾಪಿಸಿರುತ್ತಾರೆ.

06/02/2015

4. ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಶಿಕ್ಷಕರ ಶಿಕ್ಷಣ ಯೋಜನೆಯನ್ನು ಜಾರಿಗೊಳಿಸಲು ಹಾಗೂ ರಾಜ್ಯದ ಪಾಲು ಮತ್ತು ಕೇಂದ್ರ ಪಾಲು ಸೇರಿದಂತೆ ಒಟ್ಟು ರೂ.154.15 ಕೋಟಿಗಳನ್ನು ಬಿಡುಗಡೆ ಮಾಡಲು ನಿರ್ದೇಶಕರು, ಡಿಎಸ್‌ಇಆರ್‌ಟಿ ರವರು ಕೋರಿರುತ್ತಾರೆ.
5. ಮೇಲ್ಕಂಡ ಅಂಶಗಳ ಕುರಿತು ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಮಾಹಿತಿ 2014, ಬೆಂಗಳೂರು ದಿನಾಂಕ: 06.02.2015**

6. ಮಾನವ ಸಂಪನ್ಮೂಲ ಇಲಾಖೆಯ ಶಿಕ್ಷಕರ ಶಿಕ್ಷಣದ ಮಾರ್ಗಸೂಚನೆಗಳಂತೆ ಹಾಗೂ ಕೇಂದ್ರ ಸರ್ಕಾರದ ಶಿಕ್ಷಕರ ಶಿಕ್ಷಣ ಗುಣಮಟ್ಟ ನಿಷ್ಕರ್ಷ ಮಂಡಳಿ (Teacher Education Appraisal Board, TEAB) ನೀಡಿರುವ ಸಲಹೆಗಳಂತೆ ಕೇಂದ್ರ ಪುರಸ್ಕೃತ ಶಿಕ್ಷಕರ ಶಿಕ್ಷಣ ಯೋಜನೆಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಶಿಕ್ಷಕರ ಶಿಕ್ಷಣದ ಸಮಿತಿಯನ್ನು ರಚಿಸಿ ಸದರಿ ಸಮಿತಿಯ ಮೇಲ್ವಿಚಾರಣೆಯಲ್ಲಿ ರಾಜ್ಯದಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಲು ನಿರ್ದೇಶಕರು, ಡಿಎಸ್‌ಇಆರ್‌ಟಿ, ಬೆಂಗಳೂರು ರವರಿಗೆ ಅನುಮತಿಸಿದೆ.
7. ರಾಜ್ಯದಲ್ಲಿ ಹೊಸ ಶೈಕ್ಷಣಿಕ ಜಿಲ್ಲೆಗಳಾದ ಚಿಕ್ಕಬಳ್ಳಾಪುರ, ರಾಮನಗರ ಹಾಗೂ ಯಾದಗಿರಿಗಳಲ್ಲಿ ಪ್ರಸ್ತುತ ಇರುವ 03 ಸರ್ಕಾರಿ ಶಿಕ್ಷಕರ ಶಿಕ್ಷಣ ಸಂಸ್ಥೆಗಳನ್ನು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗಳನ್ನಾಗಿ ಉನ್ನತೀಕರಿಸಲು ಅನುಮತಿಸಿದೆ.
8. ಸರ್ಕಾರಿ ಶಿಕ್ಷಣ ಮಹಾವಿದ್ಯಾಲಯ, ಚಿಕ್ಕಬಳ್ಳಾಪುರ ಮತ್ತು ಹುಬ್ಬಳ್ಳಿಯ ಅನುದಾನಿತ KLE ಶಿಕ್ಷಣ ಮಹಾವಿದ್ಯಾಲಯವನ್ನು ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯಗಳನ್ನಾಗಿ (ಸಿಟಿಇ) ಮೇಲ್ದರ್ಜೆಗೇರಿಸಲು ಅನುಮತಿಸಿದೆ.
9. ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿನ ಶಿಕ್ಷಣ ವಿಭಾಗವನ್ನು ಶಿಕ್ಷಣ ಉನ್ನತ ಅಧ್ಯಯನ ಸಂಸ್ಥೆ (IASE) ಯಾಗಿ ಮೇಲ್ದರ್ಜೆಗೇರಿಸಲು ಅನುಮತಿಸಿದ್ದು, ಗುಲ್ಬರ್ಗ ವಿಶ್ವವಿದ್ಯಾಲಯದ ಕುಲಪತಿಗಳನ್ನು ಸಂಪರ್ಕಿಸಿ ಅಗತ್ಯ ಸಹಕಾರವನ್ನು ಪಡೆದು ಸದರಿ ಸಂಸ್ಥೆಯನ್ನು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ಶೈಕ್ಷಣಿಕ ಅಭಿವೃದ್ಧಿಗಾಗಿ ಬಳಸಿಕೊಳ್ಳಲು ಅನುಮತಿಸಿದೆ.
10. ಶಿಕ್ಷಕರ ಶಿಕ್ಷಣ ಯೋಜನೆಯ ಮಾರ್ಗಸೂಚನೆಗಳಂತೆ ಪ್ರಸ್ತುತ ಇರುವ DSERT, IASEs, CTEs ಮತ್ತು DIETs ಗಳನ್ನು ಪುನರ್ ರಚನೆ ಹಾಗೂ ಪುನರ್ ಸಂಯೋಜನೆ ಮಾಡಲು ನಿಯಮಾನುಸಾರ ಸೇವಾ ನಿಯಮಾವಳಿಗಳನ್ನು ರಚಿಸಿ ಸೂಕ್ತ ಪ್ರಾಧಿಕಾರದಿಂದ ಅನುಮತಿ ಪಡೆದು ಸದರಿ ಸಂಸ್ಥೆಗಳನ್ನು ಉನ್ನತೀಕರಿಸಲು ಅಗತ್ಯ ಕ್ರಮ ವಹಿಸಲು ಅನುಮತಿಸಿದೆ.
11. ಸದರಿ ಯೋಜನೆಯ ಅನುಷ್ಠಾನದಲ್ಲಿ ಕೈಗೊಳ್ಳಬಹುದಾದ ಕಟ್ಟಡದ ನಿರ್ಮಾಣ ಮಾಡಲು & ಅಗತ್ಯ ಐಸಿಟಿ ಹಾಗೂ ಇತರೆ ಶೈಕ್ಷಣಿಕ ಅಭಿವೃದ್ಧಿಗಾಗಿ ಬೇಕಾಗುವ ಉಪಕರಣಗಳನ್ನು ಖರೀದಿ ಮಾಡಲು ನಿಯಮಾನುಸಾರ ಮತ್ತು ಪ್ರಚಲಿತ ಆರ್ಥಿಕ ನಿಯಮಗಳು ಹಾಗೂ ಕೆ.ಟಿ.ಪಿ.ಪಿ ನಿಯಮಗಳನ್ನು ಚಾಚು ತಪ್ಪದೆ ಪಾಲಿಸುವುದು.
12. ಈ ಯೋಜನೆಯನ್ನು ರಚನಾತ್ಮಕವಾಗಿ ಅನುಷ್ಠಾನಗೊಳಿಸಲು ಡಿಎಸ್‌ಇಆರ್‌ಟಿ, ಬೆಂಗಳೂರು ಇಲ್ಲಿ ರಾಜ್ಯ ಮಟ್ಟದ ಶಿಕ್ಷಕರ ಶಿಕ್ಷಣ ಕೋಶವನ್ನು ಸ್ಥಾಪಿಸಲು ಅನುಮತಿಸಿದೆ.

06/02/2015

13. ನಿರ್ದೇಶಕರು, ಡಿಎಸ್‌ಇಆರ್‌ಟಿ, ಬೆಂಗಳೂರು ರವರಿಗೆ ಶಿಕ್ಷಕರ ಶಿಕ್ಷಣದ ಪೂರ್ಣ ಜವಾಬ್ದಾರಿಯನ್ನು ವಹಿಸಿದ್ದು, ಈ ಸಂಬಂಧದಲ್ಲಿ ನಿರ್ದೇಶಕರು, ಡಿಎಸ್‌ಇಆರ್‌ಟಿ, ಬೆಂಗಳೂರು ರವರ ಅಧ್ಯಕ್ಷತೆಯಲ್ಲಿ ಯೋಜನಾ ನಿರ್ವಹಣಾ ಸಮಿತಿಯನ್ನು ರಚಿಸಿ ಪ್ರತಿ ಮಾಹೆಯಲ್ಲಿ ಕಾರ್ಯಕ್ರಮದ ಪ್ರಗತಿ ಪರಿಶೀಲನೆ ನಡೆಸಲು ಸೂಚಿಸಿದೆ.
14. ಈ ಯೋಜನೆಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಹಂತದ ಅಧಿಕಾರಿಗಳು/ ಸಿಬ್ಬಂದಿಗೆ ನಿರ್ಧಿಷ್ಟವಾದ ಜವಾಬ್ದಾರಿಗಳನ್ನು ನೀಡಿ ನಿಗಧಿತ ಸಮಯದೊಳಗೆ ಕಾರ್ಯನಿರ್ವಹಿಸಿ ಈ ಯೋಜನೆಯನ್ನು ಯಶಸ್ವಿಗೊಳಿಸಲು ನಿಯಮಾನುಸಾರ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ.
15. ಈ ಆದೇಶವನ್ನು ಕರ್ನಾಟಕ ಸರ್ಕಾರ (ವ್ಯವಹಾರ ನಿರ್ವಹಣೆ) ನಿಯಮಾವಳಿ 1977ರ ನಿಯಮ 17 ಉಪನಿಯಮ (2) ರಡಿಯಲ್ಲಿ ಪರುಂತಕದ ವ್ಯಾಪ್ತಿಗೆ ಬರುತ್ತಿದ್ದು ಅದರನ್ವಯ ಹಾಗೂ ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಐ.ಎಫ್.ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ & ಇ–ಆಡಳಿತ)
06/02/2015

ಪ್ರತಿ:

| | |
|---|---|
| 1. | ಸಂಕಲನಕಾರರು, ಕರ್ನಾಟಕ ರಾಜ್ಯ ಗೆಜೆಟ್, ಬೆಂಗಳೂರು ಇವರಿಗೆ ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸಲು ಕೋರಿ |
| 2. | ಮಹಾಲೇಖಪಾಲಕರು, ಕರ್ನಾಟಕ, ಬೆಂಗಳೂರು |
| 3. | ಸರ್ಕಾರದ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಮಾಹಿತಿಗಾಗಿ ಸಲ್ಲಿಸಿದೆ. |
| 4. | ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು |
| 5. | ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ ರಾಷ್ಟ್ರೀಯ ಮಾದ್ಯಮಿಕ ಶಿಕ್ಷಣ ಅಭಿಯಾನ, ಬೆಂಗಳೂರು |
| 6. | ಅಪರ ಅಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ |
| 7. | ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗ |
| 8. | ನಿರ್ದೇಶಕರು, ಡಿಎಸ್‌ಇಆರ್‌ಟಿ, ಬೆಂಗಳೂರು |
| 9. | ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ, ಸಹ ನಿರ್ದೇಶಕರುಗಳಿಗೆ (ನಿರ್ದೇಶಕರು, ಡಿಎಸ್‌ಇಆರ್‌ಟಿ, ಬೆಂಗಳೂರು ಮೂಲಕ) |
| 10. | ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), (ಅಭಿವೃದ್ಧಿ) / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ನಿರ್ದೇಶಕರು, ಡಿಎಸ್‌ಇಆರ್‌ಟಿ, ಬೆಂಗಳೂರು ಮೂಲಕ) |
| 11. | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು |
| 12. | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ರವರ ಆಪ್ತ ಕಾರ್ಯದರ್ಶಿಗಳು |